# ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ/ಆ-1/161/ಸು/2021

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ.5079, ವಿಧಾನ ಸೌಧ,
ಬೆಂಗಳೂರು-560 001, ದಿನಾಂಕ: 19.10.2023.

## ಸುತ್ತೋಲೆ

ವಿಷಯ: ದಿನಾಂಕ: 30.10.2023 ರಿಂದ 05.11.2023 ರವರೆಗೆ ರಾಜ್ಯಾದ್ಯಂತ ಜಾಗೃತಿ ಅರಿವು ಸಪ್ತಾಹ-2023ನ್ನು ಆಚರಿಸುವ ಬಗ್ಗೆ.

ಉಲ್ಲೇಖ:ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ:175:ಸೇಲೋಇಯ:2023. ದಿನಾಂಕ:26.09.2023.

***

ಉಲ್ಲೇಖಿತ ಸುತ್ತೋಲೆ ಅನ್ವಯ ದಿನಾಂಕ: 30.10.2023 ರಿಂದ 05.11.2023 ರವರೆಗೆ ಜಾಗೃತಿ ಅರಿವು ಸಪ್ತಾಹವನ್ನು ರಾಜ್ಯಾದ್ಯಂತ ಆಚರಿಸಲು ನಿರ್ಧರಿಸಲಾಗಿದ್ದು ವಿಧಾನ ಪರಿಷತ್ತಿನ ಸಚಿವಾಲಯದ ವತಿಯಿಂದ **"ಜಾಗೃತಿ ಅರಿವು ಸಪ್ತಾಹ" ಆಚರಣೆಯ ಸಂಬಂಧ ಪ್ರಮಾಣ ವಚನ ಸ್ವೀಕರಿಸಲು ದಿನಾಂಕ:30.10.2023 ರಂದು ವಿಧಾನ ಸೌಧದ ಮೊದಲನೇ ಮಹಡಿಯಲ್ಲಿರುವ ಸೆಂಟ್ರಲ್ ಹಾಲ್‌ನಲ್ಲಿ ಬೆಳಗ್ಗೆ 11.00 ಗಂಟೆಗೆ** ಆಯೋಜಿಸಲಾಗಿರುತ್ತದೆ.

ಆದುದರಿಂದ, ಈ ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಮಾಣ ವಚನವನ್ನು ಸ್ವೀಕರಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ. (ಜಾಗೃತಿ ಅರಿವು ಸಪ್ತಾಹ ಪ್ರಮಾಣ ವಚನಕ್ಕಾಗಿ ಪುಟ ತಿರುಗಿಸಿ ನೋಡಿ)

Anasuya

**(ಅನಸೂಯಮ್ಮ)**
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ಗೆ:

ವಿಧಾನ ಪರಿಷತ್ತಿನ ಎಲ್ಲಾ ಅಧಿಕಾರಿ/ನೌಕರರುಗಳಿಗೆ (ಶಾಸಕರ ಭವನವು ಸೇರಿದಂತೆ)

ಪ್ರತಿಗಳು:

1. ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ.
2. ವಿಧಾನ ಪರಿಷತ್ತಿನ ಮಾನ್ಯ ಉಪ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ.
3. ವಿಧಾನ ಪರಿಷತ್ತಿನ ಮಾನ್ಯ ಸರ್ಕಾರಿ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ.
4. ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರಿಗೆ, ಕವಿಪ.
5. ಅಪರ/ಜಂಟಿ ಕಾರ್ಯದರ್ಶಿ/ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರಿಗೆ, ಕವಿಪ.
6. [illegible]
7. ರಕ್ಷಾ ಕಡತಕ್ಕೆ/ಸೂಚನಾ ಫಲಕಕ್ಕೆ/ಬಿಡಿ ಪ್ರತಿಗಳು.

# ಪ್ರತಿಜ್ಞೆ

ನಮ್ಮ ದೇಶದ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕ ಅಭಿವೃದ್ಧಿಗೆ ಭ್ರಷ್ಟಾಚಾರವು ಒಂದು ಪ್ರಮುಖ ಅಡಚಣೆಯಾಗಿದೆಯೆಂದು ನಾನು ನಂಬುತ್ತೇನೆ. ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸರ್ಕಾರ, ನಾಗರಿಕರು ಮತು ಖಾಸಗಿ ವಲಯದಂತಹ ಎಲಾ ಪಾಲುದಾರರು ಒಟಾಗಿ ಕೆಲಸ ಮಾಡಬೇಕಾಗುತ್ತದೆಂದು ನಾನು ನಂಬುತ್ತೇನೆ.

ಪ್ರತಿ ನಾಗರಿಕನು ಜಾಗರೂಕನಾಗಿದ್ದು, ಎಲ್ಲಾ ಸಮಯದಲ್ಲೂ ಉನ್ನತ ಗುಣಮಟ್ಟದ ಪ್ರಾಮಾಣಿಕತೆ ಮತ್ತು ನಿಷ್ಠೆಗೆ ಬದ್ಧನಾಗಿರಬೇಕೆಂದು ಹಾಗೂ ಭ್ರಷ್ಟಾಚಾರದ ವಿರುದ್ಧ ಹೋರಾಟವನ್ನು ಬೆಂಬಲಿಸಬೇಕೆಂದು ನಾನು ಅರಿತಿದ್ದೇನೆ.

ಆದ್ದರಿಂದ, ನಾನು ಈ ರೀತಿ ಪ್ರತಿಜ್ಞೆ ಮಾಡುತ್ತೇನೆ :-

- ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಪ್ರಾಮಾಣಿಕತೆ ಮತ್ತು ಕಾನೂನಿನ ನಿಯಮಗಳನ್ನು ಅನುಸರಿಸುತ್ತೇನೆ;
- ಲಂಚವನ್ನು ಪಡೆಯುವುದಿಲ್ಲ ಹಾಗೂ ನೀಡುವುದೂ ಇಲ್ಲ;
- ಎಲ್ಲಾ ಕಾರ್ಯಗಳನ್ನು ಪ್ರಾಮಾಣಿಕ ಮತ್ತು ಪಾರದರ್ಶಕ ರೀತಿಯಲ್ಲಿ ನಿರ್ವಹಿಸುತ್ತೇನೆ;
- ಸಾರ್ವಜನಿಕ ಹಿತಾಸಕ್ತಿಯಲ್ಲಿ ಕಾರ್ಯನಿರ್ವಹಿಸುತ್ತೇನೆ;
- ವೈಯಕ್ತಿಕ ನಡವಳಿಕೆಯಲ್ಲಿ ನಿಷ್ಠೆ ಪ್ರದರ್ಶಿಸುವ ಮೂಲಕ ಮಾದರಿಯಾಗಿರುತ್ತೇನೆ;
- ಯಾವುದೇ ಭ್ರಷ್ಟಾಚಾರದ ಘಟನೆಯನ್ನು ಸೂಕ್ತ ಸಂಸ್ಥೆಗೆ ವರದಿ ಮಾಡುತ್ತೇನೆ.

*****